# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬಿಂ.ಮ.ಪಾ/ಕಾ.ಪಾ.ಅ/ಯ.ವ/ಆ.ಅ/ 27/17-18

ಕಾರ್ಯಪಾಲಕ ಅಭಿಯಂತರು(ವಿ)ರವರ ಕಛೇರಿ
ಬೃ.ಬಿಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 10.01.2018

## ಆಡಳಿತಾತ್ಮಕ ಅನುಮೋದನೆ

**ವಿಷಯ:-** Providing LED Street lights to Kempegowda Ward No-01 n Yelahanka Sub Division.

**ಉಲ್ಲೇಖ:-** ಮುಖ್ಯ ಆರ್ಥಿಕ ಅಧಿಕಾರಿಯವರ ಕಛೇರಿ ಕಾಮಗಾರಿ ಸಂಕೇತ:-001-18-000087
ಅಂದಾಜು ಮೊತ್ತ: ರೂ.20.00 ಲಕ್ಷಗಳು

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಯಲಹಂಕ ವಲಯರವರು 2016-17 ನೇ ಸಾಲಿನ ಅಯವ್ಯಯದ ಮಹಿಳೆಯರು ಪ್ರತಿನಿಧಿಸುವ ವಾರ್ಡ್‌ನ ವಿಶೇಷ ಅನುದಾನದ ಲೆಕ್ಕ ಶಿರ್ಷಿಕೆ-**P3261** ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯ ವಿದ್ಯುತ್ ವಿಭಾಗರವರು ಕೆ.ಪಿ.ಡಬ್ಲ್ಯೂಡಿ. 2014-15 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿ ಮಂಜೂರಾತಿಗಾಗಿ ಮಂಡಿಸಿರುತ್ತಾರೆ ಮತ್ತು ಜಾಬ್ ಕೋಡ್ 001-18-000087 ನ್ನು ಪಡೆಯಲಾಗಿದೆ.

ಸದರಿ ಕಾಮಗಾರಿ ಕೆಲಸಕ್ಕೆ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)/ಪಿ.ಆರ್/394/16-17, ದಿನಾಂಕ:05-05-2016 ರಂತೆ ನೀಡಿರುವ ಅಧಿಕಾರದನ್ವಯ ಮುಖ್ಯ ಅಭಿಯಂತರರು ಮೇಲಿನ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ- 64ಮತ್ತು65 ಕ್ರಮಸಂಖ್ಯೆ: 27 ರಲ್ಲಿ ನಮೂದಿಸಲಾಗಿದೆ.

ಈ ಮೇಲ್ಕಂಡ ಅಂದಾಜುಪಟ್ಟಿಗೆ ಕೆಳಗೆ ನಮೂದಿಸಿರುವ ಷರತ್ತುಗಳನ್ನು ಪಾಲಿಸುವ ನಿಬಂಧನೆಯೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

**ಷರತ್ತುಗಳು:**

1. ಅಂದಾಜು ಪಟ್ಟಿಯ ಮೊತ್ತ ರೂ.10,000.00 ಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು
2. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು(ವಿ)
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

1. ಮುಖ್ಯ ಅಭಿಯಂತರರು, ಯಲಹಂಕ ವಲಯರವರ ಮಾಹಿತಿಗಾಗಿ.

Scanned by CamScanner